## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 782 |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 09.03.2021 |
| ಉತ್ತರಿಸಬೇಕಾದವರು | : | ನಗರಾಭಿವೃದ್ಧಿ ಸಚಿವರು |

*****

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳು ಸಣ್ಣ ಜಾಗಗಳಲ್ಲಿ ಕಡು ಬಡವರಿಗೆ ಮನೆಯನ್ನು ಕಟ್ಟಲು ಸಿಂಗಲ್ ಸೈಟ್ ಲೇಔಟ್ ಅನುಮತಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಜಿಲ್ಲಾಧಿಕಾರಿಗಳಿಂದ ಭೂ ಪರಿವರ್ತನೆಗೊಂಡ ಜಮಿನುಗಳಿಗೆ ಏಕನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ಕೋರಿ ಸಲ್ಲಿಸಲಾದ ಪ್ರಸ್ತಾವನೆಗಳನ್ನು ಸರ್ಕಾರದಿಂದ ಅನುಮೋದನೆಗೊಂಡ ಮಹಾಯೋಜನೆಯ ವಲಯ ನಿಯಮಾವಳಿಗಳಲ್ಲಿನ ಅವಕಾಶದಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ನಿಗಧಿತ ಶುಲ್ಕಗಳನ್ನು ಪಾವತಿಸಿಕೊಂಡು ಏಕನಿವೇಶನ ವಿನ್ಯಾಸ ನಕ್ಷೆಗೆ ಪ್ರಾಧಿಕಾರಗಳಿಂದ ಅನುಮೋದನೆ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಒಂದು ವೇಳೆ, ಅನಧಿಕೃತವಾಗಿ ವಿಭಜನೆಯಾಗಿರುವ ಜಮೀನು/ನಿವೇಶನಗಳಾಗಿದ್ದಲ್ಲಿ, ಅಂತಹ ಜಮೀನು/ನಿವೇಶನಗಳು ಅನಧಿಕೃತವಾಗುವುದರಿಂದ ಅಂತಹ ಪ್ರದೇಶಗಳಲ್ಲಿ ಏಕ ನಿವೇಶನ ವಿನ್ಯಾಸಕ್ಕೆ ಅನುಮೋದನೆ ನೀಡಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರಲ್ಲಿ ಅವಕಾಶವಿರುವುದಿಲ್ಲ. |
| ಆ) | ಸಿಂಗಲ್ ಸೈಟ್ ಲೇಔಟ್‌ಗಾಗಿ ಮನವಿ ಸಲ್ಲಿಸಿದ ಎಷ್ಟು ದಿನಗಳ ಒಳಗಾಗಿ ಸಂಬಂಧಿಸಿದ ನಗರಾಭಿವೃದ್ಧಿ ಪ್ರಾಧಿಕಾರಗಳು ಅನುಮತಿಯನ್ನು ನೀಡುತ್ತವೆ: ಈ ಕುರಿತು ಇರುವ ನಿಯಮಗಳೇನು: | ನಗರ ಯೋಜನಾ ಪ್ರಾಧಿಕಾರಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯಡಿ ವಿನ್ಯಾಸಗಳಿಗೆ ಅನುಮತಿ ನೀಡುತ್ತವೆ. ಅದರಂತೆ, ಕರ್ನಾಟಕ ಯೋಜನಾ ಪ್ರಾಧಿಕಾರ ನಿಯಮ 1965ರ ಕಲಂ 36(2) ರಡಿಯಲ್ಲಿ ಕಲ್ಪಿಸಲಾಗಿರುವ ಅವಕಾಶಗಳಂತೆ 90 ದಿನಗಳ ಒಳಗಾಗಿ ನಗರಾಭಿವೃದ್ಧಿ ಪ್ರಾಧಿಕಾರಗಳು ನಕ್ಷೆ ಅನುಮೋದಿಸಲು ಅಥವಾ ತಿರಸ್ಕರಿಸಲು ಅವಕಾಶವನ್ನು ಕಲ್ಪಿಸಲಾಗಿದೆ. |
| ಇ) | ನಗರಾಭಿವೃದ್ಧಿ ಪ್ರಾಧಿಕಾರಗಳು ಅಧಿಕಾರಿಗಳಿಗೆ ಲಂಚ ಸಂಗ್ರಹಿಸಿ ನೀಡುವ ಬ್ರೋಕರ್‌ಗಳ ಅಡ್ಡೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಈ ಕುರಿತು ಸರ್ಕಾರದ ನಿಲುವೇನು? | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

ನಅಇ 9 ಎಲ್.ಸಿ.ಕ್ಯೂ 2021(ಇ-ಕಡತ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು